# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 717 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 11.12.2023 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿಯ ಆಸ್ಪತ್ರೆಯು 300 ಹಾಸಿಗೆ ಸಾಮರ್ಥ್ಯ ಹೊಂದಿದ್ದು, ಹೆಚ್ಚುವರಿಯಾಗಿ 450 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸಲು ಆದೇಶ ಹೊರಡಿಸಿದ್ದು, ಯಾವಾಗ ಮೇಲ್ದರ್ಜೆಗೆರಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ; (ಆದೇಶದ ಪ್ರತಿ ನೀಡುವುದು) | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು ಮಡಿಕೇರಿಯಲ್ಲಿ ಹಾಲಿ 300 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನು ಹೊಂದಿದ್ದು, ಹೆಚ್ಚುವರಿಯಾಗಿ 450 ಹಾಸಿಗೆಗಳ ಸಾರ್ಮರ್ಥ್ಯದ ಹೊಸ ಆಸ್ಪತ್ರೆಯ ಕಟ್ಟಡವನ್ನು ಅಂದಾಜು ಮೊತ್ತ ರೂ.10000.00ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 105 ಎಂಪಿಎಸ್ 2019, ದಿನಾಂಕ:06-11-2019ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶ ಹೊರಡಿಸಲಾಗಿದೆ ದಿನಾಂಕ:06.11.2019ರ ಆದೇಶವನ್ನು ಅನುಬಂಧಲ್ಲಿ ಒದಗಿಸಿದೆ.<br><br>450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಕಾಮಗಾರಿಯಲ್ಲಿ 300 ಹಾಸಿಗೆಯ ಸಾಮರ್ಥ್ಯದ ಜಿಲ್ಲಾ ಆಸ್ಪತ್ರೆ ಕಟ್ಟಡ ನಿರ್ಮಾಣ ಹಾಗೂ 150 ಹಾಸಿಗೆಯ ಸಾಮರ್ಥ್ಯದ ಎಂ.ಸಿ.ಹೆಚ್ ಆಸ್ಪತ್ರೆಯ ಕಟ್ಟಡವನ್ನು ತಾಯಿ ಮತ್ತು ಮಕ್ಕಳ ಆಸ್ಪತ್ರೆಯಾಗಿ ನಿರ್ಮಾಣ ಮಾಡಲಾಗುತ್ತಿದ್ದು, ಅದರಲ್ಲಿ 150 ಹಾಸಿಗೆ ಸಾಮರ್ಥ್ಯದ ಎಂ.ಸಿ.ಹೆಚ್ ಆಸ್ಪತ್ರೆಯ ಕಟ್ಟಡವು ಪೂರ್ಣಗೊಂಡಿರುತ್ತದೆ.<br><br>300 ಹಾಸಿಗಳ ಸಾಮರ್ಥ್ಯದ ಆಸ್ಪತ್ರೆ ಕಟ್ಟಡ ಕಾಮಗಾರಿಯು ಪರಿಷ್ಕೃತ ಅಂದಾಜಿನ ಪ್ರಕಾರ ಪೂರ್ಣಗೊಂಡಿದ್ದು, ಕಾರ್ಯರಾಂಭ ಮಾಡಲು ಅಗತ್ಯ ಉಪಕರಣಗಳನ್ನು ಖರೀದಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

| | | |
|---|---|---|
| ಆ) | ಸದರಿ ಕಾಮಗಾರಿಗೆ ಮಂಜೂರಾಗಿರುವ ಒಟ್ಟು ಅನುದಾನ ಎಷ್ಟು; ಖರ್ಚಾಗಿರುವ ಮತ್ತು ಬಾಕಿ ಉಳಿದಿರುವ ಅನುದಾನ ಎಷ್ಟು; ಕಾಮಗಾರಿ ಯಾವ ಕಾಲಮಿತಿಯ ಒಳಗೆ ಪೂರ್ಣಗೊಳಿಸಲಾಗುವುದು; | ಕಾಮಗಾರಿಗೆ ಅನುಮೋದನೆಯಾದ ಅಂದಾಜು ಮೊತ್ತ ರೂ.100.00 ಕೋಟಿಗಳಾಗಿದ್ದು, ಪರಿಷ್ಕೃತ ಅಂದಾಜು ಮೊತ್ತ ರೂ.135.00 ಕೋಟಿ ಆಗಿರುತ್ತದೆ. ಇದುವರೆಗೆ ವೆಚ್ಚವಾಗಿರುವ ಮೊತ್ತ ರೂ.124.94 ಕೋಟಿ, ಬಾಕಿ ಉಳಿದಿರುವ ಮೊತ್ತ (ಅಂತಿಮ ಬಿಲ್ಲು ಪಾವತಿಸಬೇಕಾಗಿರುತ್ತದೆ) ರೂ.10.05 ಕೋಟಿ.<br><br>450 ಹಾಸಿಗೆ ಆಸ್ಪತ್ರೆ ಕಾಮಗಾರಿಯಲ್ಲಿ 150 ಹಾಸಿಗೆಯ ಎಂ.ಸಿ.ಹೆಚ್ ಆಸ್ಪತ್ರೆಯ ಕಟ್ಟಡ ಕಾಮಗಾರಿಯು ಪೂರ್ಣಗೊಂಡಿದ್ದು, 300 ಹಾಸಿಗೆಯ ಆಸ್ಪತ್ರೆ ಕಟ್ಟಡ ಕಾಮಗಾರಿಯು ಪರಿಷ್ಕೃತ ಅಂದಾಜಿನ ಪ್ರಕಾರ ಪೂರ್ಣಗೊಂಡಿದ್ದು, ಸಂಪೂರ್ಣವಾಗಿ ಕಾರ್ಯನಿರ್ವಹಿಸಲು ಅಗತ್ಯ ಉಪಕರಣಗಳ ಖರೀದಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಇ) | ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇಲ್ಲದಿರುವುದರಿಂದ ಅಲ್ಲಿನ ಸಾರ್ವಜನಿಕರು ಮೈಸೂರು, ಬೆಂಗಳೂರು, ಮಂಗಳೂರಿನಂತಹ ದೂರದ ಆಸ್ಪತ್ರೆಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆಂದು ಹಿಂದಿನ ಅಧಿವೇಶನದಲ್ಲಿ ತಿಳಿಸಿದ್ದು, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿಯ ಅಧೀನ ಬೋಧಕ ಆಸ್ಪತ್ರೆಯು 300 ಹಾಸಿಗೆ ಸಾಮರ್ಥ್ಯ ಹೊಂದಿದ್ದು, ಲಭ್ಯವಿರುವ ಎಲ್ಲಾ ಚಿಕಿತ್ಸೆಗಳನ್ನು ಆಸ್ಪತ್ರೆಯಲ್ಲಿಯೇ ಒದಗಿಸಲಾಗುತ್ತಿದೆ. ಸೂಪರ್ ಸ್ಪೆಷಾಲಿಟಿ ಚಿಕಿತ್ಸೆ ಅಗತ್ಯ ಸಂದರ್ಭಗಳಲ್ಲಿ ಮಾತ್ರ, ರೋಗಿಯ ಇಚ್ಛಾನುಸಾರ ಇತರೆ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡಲಾಗುತ್ತಿದೆ. |

**ಸಂಖ್ಯೆ:** ಎಂಇಡಿ 592 ಎಂಎಸ್ಎಫ್ 2023

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:

ನಿರ್ದೇಶಕರು, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ ಇವರ ಪತ್ರ ಸಂಖ್ಯೆ:ಕೊವೈವಿಸಂಮ/ಕಟ್ಟಡ/01 ಮತ್ತು 01 (2) /2019-20, ದಿನಾಂಕ 22.07.2019 ಮತ್ತು ದಿನಾಂಕ 21.10.2019.

ಪ್ರಸ್ತಾವನೆ:

ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು 2016-17 ನೇ ಸಾಲಿನಿಂದ 150 ಎಂಬಿಬಿಎಸ್ ಪ್ರವೇಶಮಿತಿಯೊಂದಿಗೆ ಸ್ಥಾಪಿತಗೊಂಡಿರುತ್ತದೆ. ಹಾಲಿ ಇರುವ ಆಸ್ಪತ್ರೆಯು 300 ಹಾಸಿಗೆ ಸಾಮರ್ಥ್ಯ ಹೊಂದಿದ್ದು, ಈ ಆಸ್ಪತ್ರೆಯು ಸದರಿ ವೈದ್ಯಕೀಯ ಕಾಲೇಜಿಗೆ ಬೋಧಕ ಆಸ್ಪತ್ರೆಯಾಗಿ ಹೊಂದಿಕೊಂಡಿರುತ್ತದೆ.

ಭಾರತೀಯ ವೈದ್ಯಕೀಯ ಪರಿಷತ್ತಿನ ಮಾರ್ಗಸೂಚಿಗಳನ್ವಯ ಹಾಲಿ ಇರುವ ಆಸ್ಪತ್ರೆಯನ್ನು 750 ಹಾಸಿಗೆ ಸಾಮರ್ಥ್ಯವುಳ್ಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಬೇಕಾಗಿರುತ್ತದೆ. ಜಿಲ್ಲಾ ಆಸ್ಪತ್ರೆಯನ್ನು ಆಯಾ ವೈದ್ಯಕೀಯ ಕಾಲೇಜಿನ ಅಧೀನಕ್ಕೆ ವರ್ಗಾಯಿಸಿದ ಸಂದರ್ಭದಲ್ಲಿ ಈ ಆಸ್ಪತ್ರೆಯ ಹಾಸಿಗೆ ಸಾಮರ್ಥ್ಯವು 300 ಕ್ಕಿಂತಲೂ ಕಡಿಮೆ ಇದ್ದು, ಈ ಆಸ್ಪತ್ರೆಯನ್ನು ಉನ್ನತೀಕರಿಸಿದಾಗ್ಯೂ ಸಹ ರೋಗಿಗಳ ಚಿಕಿತ್ಸೆಗೆ ಹಾಗೂ ಎನ್‌ಐಸಿಯು ಮತ್ತಿತರೆ ಸೌಲಭ್ಯಗಳನ್ನು ಸ್ಥಾಪಿಸಲು ಮತ್ತು ವಿಸ್ತರಿಸಲು ಸ್ಥಳಾವಕಾಶದ ಕೊರತೆ ಇರುತ್ತದೆ.

2019-20 ನೇ ಸಾಲಿನ ಆಯವ್ಯಯದಲ್ಲಿ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆ ಕಟ್ಟಡವನ್ನು ರೂ.100.00 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲು ಘೋಷಿಸಲಾಗಿದೆ.

ಓದಲಾದ ಪತ್ರದಲ್ಲಿ ನಿರ್ದೇಶಕರು, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ ಇವರು ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಹೊಸ ಆಸ್ಪತ್ರೆ ಕಟ್ಟಡವನ್ನು ಪ್ರಾರಂಭಿಸಲು ರೂ.18561.74 ಲಕ್ಷಗಳ ಆವರ್ತಕ ಮತ್ತು ಅನಾವರ್ತಕ ವೆಚ್ಚವನ್ನೊಳಗೊಂಡಂತೆ ಯೋಜನಾ ವರದಿಯನ್ನು ಹಾಗೂ ಮುಖ್ಯ ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ಘಟಕ, ಬೆಂಗಳೂರು ಇವರಿಂದ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆಯನ್ನು ರೂ.11062.00 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಸವಿವರ ಅಂದಾಜು ಪಟ್ಟಿಯನ್ನು ಪಡೆದು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ವಿವರಗಳು ಕೆಳಕಂಡಂತಿರುತ್ತವೆ:

| Sl. No. | Details | Cost (lakhs in Rs.) |
|---|---|---|
| **Recurring Cost:** | | |
| 1. | Human Resources | 4719.27 |
| 2. | Drugs, Linen, Beds, Diet etc., | 957.00 |
| **Non-Recurring Cost:** | | |
| 1. | Civil Works | 11062.00 |
| 2. | Purchase of Equipments | 1728.12 |
| 3. | Purchase of Furnitures | 105.25 |
| | **Total** | **18561.74** |

Office of the Chief Engineer
No. 2364
Date 16/11

ಈ ಪ್ರಸ್ತಾವನೆಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 706 ವೆಚ್ಚ-5/2019 ದಿನಾಂಕ 27.09.2019 ರಲ್ಲಿ ಆಯವ್ಯಯ ಘೋಷಣೆಯಂತೆ ರೂ.100.00 ಕೋಟಿಗಳಲ್ಲಿಯೇ ಯೋಜನೆಯನ್ನು ಪೂರ್ಣಗೊಳಿಸುವಂತೆ ತಿಳಿಸಿದ ಹಿನ್ನೆಲೆಯಲ್ಲಿ, ರೂ.100.00 ಕೋಟಿಗಳ ಮೊತ್ತದ ಮಿತಿಯಲ್ಲಿಯೇ ಪರಿಷ್ಕೃತ ಅಂದಾಜು ಪಟ್ಟಿಯನ್ನು ಮುಖ್ಯ ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರಿಂದ ಪಡೆದು ಸಂಸ್ಥೆಯ ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆ ಕಟ್ಟಡವನ್ನು ರೂ.10000.00 ಲಕ್ಷಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿ ಕೆಳಕಂಡ ಆದೇಶವನ್ನು ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 105 ಎಂಪಿಎಸ್ 2019, ಬೆಂಗಳೂರು, ದಿನಾಂಕ 06.11.2019</u>

ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆ ಕಟ್ಟಡವನ್ನು ರೂ.10000.00 ಲಕ್ಷಗಳ (ಹತ್ತು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ಅಂದಾಜು ಮೊತ್ತದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸದರಿ ಆಸ್ಪತ್ರೆ ಕಟ್ಟಡ ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ.10000.00 ಲಕ್ಷಗಳ ಮೊತ್ತಕ್ಕೆ ಸೀಮಿತಗೊಳಿಸತಕ್ಕದ್ದು ಹಾಗೂ ಇದಕ್ಕೆ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

ಸದರಿ ಆಸ್ಪತ್ರೆ ಕಟ್ಟಡ ಪೂರ್ಣಗೊಳ್ಳುವ ವೇಳೆಗೆ ಉಪಕರಣಗಳ ಖರೀದಿ / ಪೀಠೋಪಕರಣಗಳ ಖರೀದಿಗೆ ಹಾಗೂ ಅಗತ್ಯವಿರುವ ಮಾನವ ಸಂಪನ್ಮೂಲ ಹಾಗೂ ಇನ್ನಿತರೆ ಆವರ್ತಕ / ಅನಾವರ್ತಕ ವೆಚ್ಚಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಪ್ರಸ್ತಾವನೆಯನ್ನು ಸಂಸ್ಥೆಯ ಮುಖ್ಯಸ್ಥರು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 4210-03-105-1-10-386 ನಿರ್ಮಾಣ ಅಡಿಯಲ್ಲಿ ಒದಗಿಸಲಾಗುವ ಅನುದಾನದಲ್ಲಿ ಭರಿಸತಕ್ಕದ್ದು.

ಸದರಿ ಕಟ್ಟಡ ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಹಾಗೂ ನಿಯಮಗಳು, 2000 ರನ್ವಯ ಹಾಗೂ ಈ ಸಂಬಂಧಿತವಾಗಿ ಆರ್ಥಿಕ ಇಲಾಖೆಯು ಕಾಲಕಾಲಕ್ಕೆ ಹೊರಡಿಸಲಾಗುವ ಮಾರ್ಗಸೂಚಿಗಳು, ಸುತ್ತೋಲೆಗಳು ಹಾಗೂ ಆದೇಶಗಳನ್ವಯ ನಿರ್ವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 706 ವೆಚ್ಚ-5/2019, ದಿನಾಂಕ 27.09.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಯೋಇಸ/62/ಜಊವಿ/2019, ದಿನಾಂಕ 03.08.2019 ರಲ್ಲಿ ನೀಡಿರುವ ಅನುಮೋದನೆ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
06/11/2019
(ಬಿ.ವಿ.ಮಾರುತಿ ಪ್ರಸನ್ನ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆ & ಆರ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.

ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.

ಸನ್ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ವಿಧಾನಸೌಧ, ಬೆಂಗಳೂರು.

ಮುಖ್ಯ ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-01

ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560009.

ನಿರ್ದೇಶಕರು, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ.

10. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಗಳು, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು – (ವಿಷಯ ಸಂಖ್ಯೆ:ಸಿ.650/2019).
12. ಯೋಜನಾಧಿಕಾರಿಗಳು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.